ಶಿವಮೊಗ್ಗ ಕೃಷಿ ವಿಶ್ವವಿದ್ಯಾಲಯ ಸಿಬ್ಬಂದಿ ನೇಮಕಾತಿ ಕುರಿತು

ಶ್ರೀ ಎಸ್. ರುದ್ರೇಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :-

55 (117) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2013 ರಲ್ಲಿ ಶಿವಮೊಗ್ಗ ನಗರದಲ್ಲಿ ನೂತನಾಗಿ ಪ್ರಾರಂಭಗೊಂಡ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿ ಸಿಬ್ಬಂದಿ ನೇಮಕಾತಿ ಮಾಡಿಕೊಳ್ಳುವ ಸಂಬಂಧ ನಿರ್ದೇಶಕರು, ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿಯ ನೇಮಕಾತಿಯ ಪ್ರಕ್ರಿಯೆಯನ್ನು 2015 ರಲ್ಲಿ ಅಧಿಸೂಚನೆ ಹೊರಡಿಸಿ ಈ ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಕಾರಣ ನೀಡದೆ ರದ್ದುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣವೇನು ;

(ಆ) 2018 ರಲ್ಲಿ ಪುನಃ ನೇಮಕಾತಿಗೆ ವಿ.ವಿ.ಗೆ ನಿರ್ದೇಶಕರನ್ನೊಳಗೊಂಡ ಸಿಬ್ಬಂದಿ ನೇಮಕಾತಿ ಪ್ರಕ್ರಿಯೆ ಆರಂಭಿಸಿ ಅರ್ಜಿ ಸ್ವೀಕರಿಸಿದ್ದರೂ ಈವರೆವಿಗೂ ಯಾವುದೇ ಪ್ರಕ್ರಿಯೆ ಆರಂಭಗೊಂಡಿರದಿರಲು ಕಾರಣವೇನು ;

(ಇ) ಪ್ರಸ್ತುತ ವಿ.ವಿ.ಯಲ್ಲಿ ಶೇ. 50 ಕ್ಕಿಂತಲೂ ಕಡಿಮೆ ಇರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವಿ.ವಿ.ಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಈ ಬೆಳವಣಿಗೆ ವಿ.ವಿ. ಯ ಗುಣಮಟ್ಟ ಮತ್ತು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಮಾರಕವಾಗುವುದಿಲ್ಲವೇ ; ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)